10

# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/77/2015-16 ದಿನಾಂಕ:02.06.2016

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| ಶ್ರೀಮತಿ ಕೇಶಲಿಬಾಯಿ ಗಂಡ ಲೇಟ್ ಉಮಾನಾಯ್ಕ<br>ಗ್ರಾಮ:-ಕೆ.ಕೆ.ತಾಂಡ ತಾ:-ಹೆಚ್.ಬಿ.ಹಳ್ಳಿ | ಶ್ರೀ ಕಮಲನಾಯ್ಕ ತಂದೆ ಒಬಳಪ್ಪ<br>ಗ್ರಾಮ:-ಕೆ.ಕೆ.ತಾಂಡ ತಾ:-ಹೆಚ್.ಬಿ.ಹಳ್ಳಿ |

**ವಿವಾದಿತಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮದ ಹೆಸರು | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಕೆ.ಕೋಡಿಹಳ್ಳಿ | 150/ಎ | 3-00 | ಖುಷ್ಕಿ |

**ಪೀಠಿಕೆ:-**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಕೆ.ಕೋಡಿಹಳ್ಳಿ ಗ್ರಾಮದ ವಿವಾದಿತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಕೆ.ಕೆ.ತಾಂಡ ಗ್ರಾಮದ ನಿವಾಸಿಯಾದ ಕೇಶಲಿಬಾಯಿ ಗಂಡ ಲೇಟ್ ಉಮಾನಾಯ್ಕ ಇವರು ಪೌತಿ ವಾರಸು ಪ್ರಕಾರ ಹಕ್ಕುಬದಲಾವಣೆಯನ್ನು ಮಾಡಲು ದಿನಾಂಕ:08.10.2015 ರಂದು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ-21 ರ ನೋಟೀಸನ್ನು ದಿನಾಂಕ:14.10.2015 ರಂದು ಜಾರಿಮಾಡಲಾಗಿ, ನಿಗದಿತ ಅವಧಿಯೊಳಗೆ ಅಂದರೆ ದಿನಾಂಕ:16.11.2015 ರಂದು ಕಮಲನಾಯ್ಕ ತಂದೆ ಒಬಳಪ್ಪ ಇವರು ತಕರಾರು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಕಾರಣ, ಎಂ.ಆರ್.ನಂ.23/15-16ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿ ಇವರು ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಿರುತ್ತಾರೆ. ಉಭಯ ಪಕ್ಷಕಾರರಿಗೆ ದಿನಾಂಕ:04.12.2015ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನು ದಿನಾಂಕ:04.12.2015ಕ್ಕೆ ರಿಂದ 19.05.2016 ರವರೆಗೆ ವಿಚಾರಣೆಯನ್ನು ಮಾಡಲಾಯಿತು. ಉಭಯರು ಹಾಜರಾಗಿರುತ್ತಾರೆ. ಅರ್ಜಿದಾರರು ಹೇಳುವಂತೆ; ಸದರಿ ಜಮೀನಿನಲ್ಲಿ ನಾವು ವಿಸ್ತೀರ್ಣ 1-50 ಎಕರೆ ಸಾಗುವಳಿ ಮಾಡುತ್ತಿದ್ದು ಉಳಿದ ವಿಸ್ತೀರ್ಣ 1-50 ಎಕರೆ ಜಮೀನು ತಕರಾರುದಾರರಾದ ಕಮಲನಾಯ್ಕ ಸಾಗು ಮಾಡುತ್ತಿರುತ್ತಾರೆ. ಎಂದು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ಮುಂದುವರೆದು, ಪ್ರಕರಣದಲ್ಲಿ ತಕರಾರುದಾರರು ಹಾಜರಾಗಿ ಹೇಳುವಂತೆ; ಸದರಿ ಜಮೀನಿನಲ್ಲಿ ಪಾಲು ಆಗಿರುವುದಿಲ್ಲ ಮತ್ತು ಸದರಿ ಜಮೀನು ವಿಸ್ತೀರ್ಣ ಪೈಕಿ 1-50 ಎಕರೆ ಜಮೀನಿನಲ್ಲಿ ನಾವು ಸಾಗುವಳಿ ಮಾಡುತ್ತಿರುವುದಾಗಿ ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ.

ಮುಂದುವರೆದು, ಪ್ರಕರಣದಲ್ಲಿ ಅರ್ಜಿದಾರರು ಹಾಜರಾಗಿ ಹೇಳುವಂತೆ; ಸದರಿ ಜಮೀನಿಗೆ ನಾನು ಅರ್ಜಿಯನ್ನು ಸಲ್ಲಿಸಿರುತ್ತೇನೆ. ಈ ಜಮೀನು ನನ್ನ ಗಂಡನ ಆಸ್ತಿಯಾಗಿದ್ದು, ಪೌತಿ ವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿರುತ್ತಾರೆ.

ಪ್ರಕರಣದಲ್ಲಿ ಅರ್ಜಿದಾರರು ಮತ್ತು ತಕರಾರುದಾರರು ನೀಡಿದ ಹೇಳಿಕೆ ಮತ್ತು ದಾಖಲೆಗಳನ್ನು ಪರಿಶೀಲನೆ ಮಾಡಲಾಗಿ, ಪ್ರಕರಣದಲ್ಲಿ, ಅರ್ಜಿದಾರರ ಹೆಸರಿಗೆ ಪೌತಿ ವಾರಸು ಪ್ರಕಾರ ಹಕ್ಕುಬದಲಾವಣೆ ಮಾಡಲು ಈ ಕೆಳಕಂಡಂತೆ ಆದೇಶ;

**-:ಆದೇಶ:-**

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಎಂ.ಆರ್.ನಂ.23/2015-16ರ ಪ್ರಕಾರ, ಪ್ರಕರಣದಲ್ಲಿ ಕೆ.ಕೋಡಿಹಳ್ಳಿ ಗ್ರಾಮದ ಸ.ನಂ. 150/ಎ ವಿಸ್ತೀರ್ಣ 3-00 ಎಕರೆ ಜಮೀನಿಗೆ ಅರ್ಜಿದಾರರಾದ ಕೇಶಲಿಬಾಯಿ ಗಂಡ ಲೇಟ್ ಉಮಾನಾಯ್ಕ ಇವರ ಹೆಸರಿಗೆ ಪೌತಿ ವಾರಸು ಪ್ರಕಾರ ಹಕ್ಕುಬದಲಾವಣೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:02.06.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

2/6/16

[ವಿ.ಹೆಚ್.ಮಲ್ಲಿಕಾರ್ಜುನ]
ಉಪ ತಹಶೀಲ್ದಾರ್,
ನಾಡ ಕಾರ್ಯಾಲಯ,ಕೋಗಳಿ
ಕೋಗಳಿ.

ಪ್ರತಿಯನ್ನು:-

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಕಂದಾಯ ನಿರೀಕ್ಷಕರು, ಕೋಗಳಿ.
4. ಶುದ್ಧಪ್ರತಿ ಕಡತಕ್ಕೆ.